ತಮಗೆ ಆಶ್ವಾಸನೆ ಕೊಡುತ್ತಾ ಇದ್ದೇನೆ. ನನ್ನ ಮೇಲೆ ವಿಶ್ವಾಸವಿಡಿರಿ. ನಾವು ಅದರ ಬಗ್ಗೆ ಕ್ರಮ ತೆಗೆದುಕೊಳ್ಳುತ್ತೇವೆ. ಮತ್ತು ನೀವು ಹೇಳುವ ಮಟ್ಟದಲ್ಲಿ ಆಗಿಲ್ಲ ಶ್ರೀರಾಮರೆಡ್ಡಿಯವರೇ. ಅಷ್ಟು ಹೇಳಿದ್ದೀರಲ್ಲಾ, ಭಯಂಕರವಾಗಿ ಆಗಿದೆ ಅಂತ, ಅಷ್ಟು ಆಗಿಲ್ಲ. ಆದರೆ ಇವತ್ತು ಸರ್ಕಾರ ಅದನ್ನು ಗಮನಕ್ಕೆ ತೆಗೆದುಕೊಳ್ಳುತ್ತದೆ. ಒಳ್ಳೆಯ ದೀರ್ಘವಾದ ಚರ್ಚೆಯಾಗಿದೆ. ಸರ್ಕಾರ ಅದರ ಬಗ್ಗೆ ಕ್ರಮ ತೆಗೆದುಕೊಳ್ಳುತ್ತದೆ ಎಂದು ಹೇಳಿ ನನ್ನ ಮಾತು ಮುಗಿಸುತ್ತೇನೆ.

ಅಧ್ಯಕ್ಷರು : ಸದನವನ್ನು ಅನಿರ್ದಿಷ್ಟ ಕಾಲದವರೆಗೆ ಮುಂದೂಡುತ್ತಿದ್ದೇನೆ.

(ಸದನವು 9 ಗಂಟೆ 45 ನಿಮಿಷಕ್ಕೆ ಅನಿರ್ದಿಷ್ಟ ಕಾಲದವರೆಗೆ ಮುಂದೂಡಲ್ಪಟ್ಟಿತು)

10) ಅನುಬಂಧ–1

530(632) : ಶ್ರೀ ಅಂಗಾರ ಎಸ್ (ಸೂಳ್ಯ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸುಬ್ರಹ್ಮಣ್ಯ ಗುಂಡ್ಯ ರಸ್ತೆ ಹಾಗೂ ಮೈಸೂರು ಬಂಟ್ವಾಳ ರಾಜ್ಯ ಹೆದ್ದಾರಿಯಲ್ಲಿ ರಸ್ತೆಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸುಬ್ರಹ್ಮಣ್ಯ ಗುಂಡ್ಯ ರಸ್ತೆ ದುರಸ್ತಿ ಮಾಡಿಸಲು ಹಾಗೂ ಮೈಸೂರು ಬಂಟ್ವಾಳ ರಸ್ತೆಯಲ್ಲಿ ಸುಳ್ಯ ನಗರದ ಬಳಿ ಬೈಪಾಸ್ ರಸ್ತೆ ಮಾಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ಹಾಗಿದ್ದಲ್ಲಿ ಎಷ್ಟು ಸಮಯದಲ್ಲಿ ಸರ್ಕಾರ ಈ ಬಗ್ಗೆ ಕ್ರಮಕೈಗೊಳ್ಳಲಿದೆ?

ಶ್ರೀ ಹೆಚ್.ಕೆ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಕಳೆದ ಎರಡು ತಿಂಗಳಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವ್ಯಾಪಕವಾಗಿ ಭಾರೀ ಮಳೆ ಬಿದ್ದಿರುವ ಹಿನ್ನೆಲೆಯಲ್ಲಿ ಹಾಗೂ ಸುರಿಯುತ್ತಿರುವ ಮಳೆಯಿಂದಾಗಿ ಸದರಿ ಎರಡು ರಸ್ತೆಗಳ ಕೆಲವು ಭಾಗಗಳಲ್ಲಿ ಮತ್ತು ಅಲ್ಲಲ್ಲಿ ರಸ್ತೆ ಹಾಳಾಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಸುಬ್ರಹ್ಮಣ್ಯ ಗುಂಡ್ಯ (ಗುಂಡ್ಯ ಕಲ್ಲುಂದ ಜಿಲ್ಲಾ ಮುಖ್ಯ ರಸ್ತೆ) ರಸ್ತ ಕಿಮೀ 0.00 ರಿಂದ 4.00 ಕಿಮೀ ನಲ್ಲಿ ಡಾಂಬರೀಕರಣ ಅಭಿವೃದ್ಧಿಗೆ ಈಗಾಗಲೇ ಸರ್ಕಾರದಿಂದ ಸಿಆರ್.ಎಫ್ ಅಡಿಯಲ್ಲಿ ರೂ. 50.00 ಲಕ್ಷಗಳಿಗೆ ಅನುಮೋದನೆ ನೀಡಿದ್ದು ಕಾಮಗಾರಿಯನ್ನು ನಿಯಮಾನುಸಾರ ಟೆಂಡರ್ ಕರೆದು, ಕೈಗೆತ್ತಿಕೊಳ್ಳಲಾಗುತ್ತಿದೆ. ಹಾಗೂ ಉಳಿದಂತ ಭಾಗಗಳಲ್ಲಿ ರಸ್ತೆಯಲ್ಲಿ ಬಿದ್ದಿರುವಂತ ಗುಂಡಿಗಳನ್ನು ಮುಚ್ಚಲು, ಗುಂಡಿ ಮುಚ್ಚುವ ಕಾರ್ಯಕ್ರಮ ವಡಿಯಲ್ಲಿ ಈಗಾಗಲೇ ಟೆಂಡರ್ ಕರೆದಿದ್ದು, ಸದ್ಯದಲ್ಲಿ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು. ಮೈಸೂರು ಬಂಟ್ವಾಳ ರಸ್ತೆಯಲ್ಲಿ ಸುಳ್ಯ ನಗರದ ಬಳಿ ಬೈಪಾಸ್. ರಸ್ತೆ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

ಇ) ಅನುದಾನದ ಲಭ್ಯತೆಯನ್ನಾಧರಿಸಿ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

531(634) : ಶ್ರೀ ಅಂಗಾರ ಎಸ್ (ಸೂಳ್ಯ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ದರ್ಬೆ ಸುಬ್ರಹ್ಮಣ್ಯ ರಸ್ತೆಯು ಪವಿತ್ರ ಪುಣ್ಯ ಕ್ಷೇತ್ರವಾದ ಕುಕ್ಕೆ ಸುಬ್ರಹ್ಮಣ್ಯ ದೇವಾಲಯಕ್ಕೆ ಹೋಗುವ ರಸ್ತೆಯಾಗಿದ್ದು, ಈ ರಸ್ತೆಯಲ್ಲಿ ಹೊಂಡ ಗುಂಡಿಗಳು

ಬಿದ್ದಿರುವುದರಿಂದ ವಾಹನಗಳು ಓಡಾಡಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಡಾಂಬರೀಕರಣ ಮಾಡಿಸುವ ಬಗ್ಗೆ ಸರ್ಕಾರ ಕ್ರಮಕೈಗೊಳ್ಳಲಿದೆಯೇ, ಹಾಗೂ ಎಷ್ಟು ಸಮಯದಲ್ಲಿ ಕ್ರಮ ಕೈಗೊಳ್ಳಲಿದೆ?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಕಳೆದ ಎರಡು ತಿಂಗಳಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವ್ಯಾಪಕವಾಗಿ ಭಾರೀ ಮಳೆ ಬಿದ್ದಿರುವ ಹಿನ್ನೆಲೆಯಲ್ಲಿ ಹಾಗೂ ಸುರಿಯುತ್ತಿರುವ ಮಳೆಯಿಂದಾಗಿ ಈ ರಸ್ತೆಯಲ್ಲಿ ಕೆಲವು ಭಾಗಗಳಲ್ಲಿ ಹೊಂಡ ಗುಂಡಿಗಳು ಬಿದ್ದಿರುವುದು ಗಮನಕ್ಕೆ ಬಂದಿರುತ್ತದೆ.

ಆ) ಸದರಿ ರಸ್ತೆಯ ಕಿಮೀ 27.00 ರಿಂದ 52.00 ಕಿಮೀನ ಆಯ್ದ ಭಾಗಗಳಲ್ಲಿ ಅಭಿವೃದ್ಧಿ : ಡಾಂಬರೀಕರಣ ಮಾಡುವ ಬಗ್ಗೆ ರೂ. 25.00 ಲಕ್ಷಗಳ ಮೊತ್ತಕ್ಕೆ ಸಿಆರ್‌ಎಫ್ ಅಡಿಯಲ್ಲಿ ಅನುಮೋದನೆ ದೊರೆತಿದ್ದು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಅನುದಾನದ ಲಭ್ಯತೆಯ ಮೇರೆಗೆ ಉಳಿದ ಭಾಗಗಳಲ್ಲಿ ದುರಸ್ಥಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು.

532(645) : ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗ್ರಾಮಗಳನ್ನು ಸೌರಶಕ್ತಿ ಗ್ರಾಮಗಳಾಗಿ ಪರಿವರ್ತಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ;

ಆ) ಇದ್ದಲ್ಲಿ ಯೋಜನೆಯ ಬಗ್ಗೆ ಮಾಹಿತಿ ನೀಡುವುದು;

ಇ) ಯೋಜನೆಗೆ ತಗಲುವ ಅಂದಾಜು ವೆಚ್ಚ ಎಷ್ಟು ಹಾಗೂ ಯೋಜನೆಗೆ ತಗಲಿರುವ ವೆಚ್ಚವನ್ನು ಯಾವ ಮೂಲದಿಂದ ಭರಿಸಲಾಗುವುದು;

ಈ) ಪ್ರಾರಂಭದ ಹಂತದಲ್ಲಿ ಯೋಜನೆಯನ್ನು ಎಲ್ಲಿ ಜಾರಿಗೆ ತರಲಾಗುವುದು ಹಾಗೂ ಅದು ಎಂದಿನಿಂದ ಜಾರಿಯಾಗಲಿದೆ

ಉ) ಯೋಜನೆಯು ಹಾಲಿ ಅನುಷ್ಠಾನದಲ್ಲಿರುವುದೇ?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ರಾಜ್ಯದ ಗ್ರಾಮಗಳನ್ನು ಸೌರಶಕ್ತಿ ಉಪಕರಣಗಳಿಂದ ವಿದ್ಯುದ್ದೀಕರಣಗೊಳಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಈ ಯೋಜನೆಯ ಮಾಹಿತಿಯನ್ನು ಅನುಬಂಧ–1ರಲ್ಲಿ ನೀಡಲಾಗಿದೆ.

ಇ) ಈ ಯೋಜನೆಗೆ 100 ಕೋಟಿ ರೂ. ಗಳ ಅಂದಾಜು ವೆಚ್ಚವಾಗಲಿದ್ದು ಅದರಲ್ಲಿ 30 ವೆಚ್ಚವನ್ನು ಕೇಂದ್ರ ಸರ್ಕಾರದ ಎಂ.ಎನ್.ಇ.ಎಸ್.ನಿಂದ ಅನುದಾನದ ರೂಪದಲ್ಲಿ ಪಡೆದು ಉಳಿದ ಹಣವನ್ನು ರಾಜ್ಯ ಸರ್ಕಾರದಿಂದ ಪಡೆಯುವ ಮೂಲಕ ಯೋಜನೆಯನ್ನು ಅನುಷ್ಠಾನಗೊಳಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಈ) ರಾಜ್ಯದಲ್ಲಿ ಒಟ್ಟು 224 ವಿಧಾನ ಸಭಾ ಕ್ಷೇತ್ರಗಳಿದ್ದು ಅದರಲ್ಲಿ 200 ವಿಧಾನ ಸಭಾ ಕ್ಷೇತ್ರಗಳಲ್ಲಿ ಒಂದು ಕ್ಷೇತ್ರಕ್ಕೆ 4 ಅಥವಾ 5 ರಂತೆ ಹಳ್ಳಿಗಳನ್ನು